# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 97(168)

ಮಾನ್ಯ ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

ವಿಷಯ : ಕೊಡಗು ಜಿಲ್ಲೆಯಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದಿಂದ ಸಂಕಷ್ಟಕ್ಕೀಡಾಗಿರುವ ಪ್ರವಾಸೋದ್ಯಮದ ಪುನಶ್ಚೇತನ ಕುರಿತು.

ಉತ್ತರಿಸುವ ಸಚಿವರು : ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು.

ಉತ್ತರಿಸುವ ದಿನಾಂಕ: : 10.12.2018

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರಕೃತಿ ವಿಕೋಪದಿಂದ ಪ್ರವಾಸೋದ್ಯಮ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| (ಆ) | ಬಂದಿದ್ದಲ್ಲಿ, ಪ್ರವಾಸೋದ್ಯಮ ಪುನಶ್ಚೇತನ ಹಾಗೂ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ವಿವರ ನೀಡುವುದು) | 1) ಪ್ರಕೃತಿ ವಿಕೋಪದಿಂದ ಹಾಳಗಿದ್ದ ಪ್ರವಾಸಿ ತಾಣಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳನ್ನು ಜಿಲ್ಲಾಡಳಿತದಿಂದ ವಿವಿಧ ಇಲಾಖೆಗಳ ಮೂಲಕ ದುರಸ್ತಿಪಡಿಸಿ ಪ್ರವಾಸಿಗರಿಗೆ ಭೇಟಿ ನೀಡಲು ಅವಕಾಶ ಕಲ್ಪಿಸಲಾಗಿದೆ (ತಡಿಯಂಡಮೋಳ್ ಹೊರತುಪಡಿಸಿ).<br>2) ಮಡಿಕೇರಿಯನ್ನು ಕೇಂದ್ರವಾಗಿರಿಸಿಕೊಂಡು ಪ್ರವಾಸಿಗರಿಗೆ ಕೊಡಗು ದರ್ಶನ ಮಾಡಿಸಲು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಿಂದ ಮೂರು ಮಿನಿ ಬಸ್‌ಗಳನ್ನು ಒದಗಿಸಲು ಕ್ರಮ ವಹಿಸಲಾಗಿದೆ.<br>3) ಕೊಡಗು ಜಿಲ್ಲೆಯಲ್ಲಿ ಪ್ರಕೃತಿ ವಿಕೋಪದಿಂದ ಪ್ರವಾಸೋದ್ಯಮ ಬೆಳವಣಿಗೆ ಹಾನಿಯಾಗಿದ್ದರು ಸಹ ಪ್ರವಾಸಿಗರು ಬೇಟಿ ನೀಡಲು ಯಾವುದೇ ತೊಂದರೆ ಇಲ್ಲಾ ಎಂಬುದಾಗಿ ಪ್ರವಾಸಿಗರನ್ನು ಕೊಡಗು ಜಿಲ್ಲೆಗೆ ಆಕರ್ಶಿಸಲು ವಿವಿದ ರೇಡಿಯೋ ಚಾನೆಲ್, ಡಿಜಿಟಲ್ ಮಿಡಿಯಾ, ಸಿನಿಮಾ ಥೀಯೆಟರ್, ದಿನಪತ್ರಿಕೆಗಳು, ಹಾಗೂ ಮ್ಯಾಗ್‌ಜೈನ್‌ಗಳಲ್ಲಿ ಜಾಹಿರಾತು ನೀಡಿ ಪ್ರಚಾರ ಕಾರ್ಯಕ್ರಮ ಕೈಗೊಳ್ಳಲು ಕ್ರಮ ವಹಿಸಲಾಗುತ್ತಿದೆ.<br>4) ಬೆಂಗಳೂರು, ಮುಂಬೈ, ದೆಹಲಿ ಹಾಗೂ ಕಲ್ಕತ್ತಾ ಅಂತರಾಷ್ಟ್ರಿಯ ವಿಮಾನ ನಿಲ್ದಾಣಗಳಲ್ಲಿ ಕೊಡಗು ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ವಿಕ್ಷಣೆಗೆ ಪ್ರವಾಸಿಗರು ಭೇಟಿ ನೀಡುವಂತೆ ಜಾಹಿರಾತು ನೀಡಲಾಗುತ್ತಿದೆ.<br>5) ಕೊಡಗು ಜಿಲ್ಲೆಗೆ ಪ್ರವಾಸಿಗರನ್ನು ಸೆಳೆಯಲು ದಿನಾಂಕ:08-12-2018 ರಂದು ಚನ್ನೈನಲ್ಲಿ ಖಾಸಗಿ ಸ್ಟೇಕ್ ಹೋಲ್ಡರ್‌ಗಳನ್ನು ಒಳಗೊಂಡ ಬಿ2ಬಿ ಸಭೆ ಹಾಗೂ ರೋಡ್ ಶೋ ಅನ್ನು ಆಯೋಜಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| (ಇ) | ಜಿಲ್ಲೆಯಲ್ಲಿ ಪರಿಸರ ಸ್ನೇಹಿ ಹಾಗೂ ಪ್ರವಾಸಿ ಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸರ್ಕಾರ ರೂಪಿಸಿರುವ ಕಾರ್ಯಕ್ರಮಗಳೇನು: ಹಾಗೂ ಇದಕ್ಕೆ ಪೂರಕವಾಗಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳೇನು? | **ಕೊಡಗಿನಲ್ಲಿ ಪರಿಸರ ಪ್ರವಾಸೋದ್ಯಮ ಬೆಳವಣಿಗೆ ದೃಷ್ಟಿಯಿಂದ ಈ ಕೆಳಕಂಡ ಸೌಲಭ್ಯ/ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.**<br>1. ಮಡಿಕೇರಿಯಲ್ಲಿರುವ ಶ್ರೀ ಓಂಕಾರೇಶ್ವರ ದೇವಸ್ಥಾನದ ಬಳಿ ಶೌಚಾಲಯ ಬಟ್ಟೆ ಬದಲಿಸುವ ಕೊಠಡಿ ನಿರ್ಮಾಣ ರೂ.36.60 ಲಕ್ಷಗಳು.<br>2. ಮಡಿಕೇರಿ ತಾಲ್ಲೂಕಿನ ನಾಲ್ಕುನಾಡು ಅರಮನೆಗೆ ಸಂಪರ್ಕ ರಸ್ತೆ ಅಭಿವೃದ್ಧಿ (ಸಿ.ಸಿ.ರಸ್ತೆ) ರೂ.300.00 ಲಕ್ಷಗಳು.<br>3. ಇರ್ಪು ಜಲಪಾತದ ಬಳಿ ಪಾರ್ಕಿಂಗ್ ಹಾಗೂ ಉದ್ಯಾನವನ ನಿರ್ಮಾಣ ರೂ.50.00 ಲಕ್ಷಗಳು.<br>4. ನಂಜರಾಯಪಟ್ಟಣದಿಂದ ದುಬಾರೆ ವರೆಗಿನ ರಸ್ತೆಯನ್ನು ರೂ.119.48 ಲಕ್ಷಗಳ ಅಂದಾಜಿನಲ್ಲಿ ಪೂರ್ಣಗೊಳಿಸಲಾಗಿದೆ.<br>5. ದುಬಾರೆಯ ಬಳಿ ಕಾವೇರಿ ನದಿ ತೀರದಲ್ಲಿ ರೂ.40.00 ಲಕ್ಷಗಳ ಅಂದಾಜಿನಲ್ಲಿ ಪಾರ್ಕಿಂಗ್ ಸೌಲಭ್ಯ ಒದಗಿಸಲಾಗುತ್ತಿದೆ.<br>6. ಮಡಿಕೇರಿಯನ್ನು ಕೇಂದ್ರವಾಗಿರಿಸಿಕೊಂಡು ಪ್ರವಾಸಿಗರಿಗೆ ಕೊಡಗು ದರ್ಶನ ಮಾಡಿಸಲು ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದಿಂದ ಮೂರು ಮಿನಿ ಬಸ್‌ಗಳನ್ನು ಒದಗಿಸಲು ಕ್ರಮ ವಹಿಸಲಾಗಿದೆ.<br>7. ಬೆಂಗಳೂರು, ಮುಂಬೈ, ದೆಹಲಿ ಹಾಗೂ ಕಲ್ಕತ್ತಾ ಅಂತರಾಷ್ಟ್ರೀಯ ವಿಮಾನ ನಿಲ್ದಾಣಗಳಲ್ಲಿ ಕೊಡಗು ಜಿಲ್ಲೆಯಲ್ಲಿರುವ ಪ್ರವಾಸಿ ತಾಣಗಳ ವೀಕ್ಷಣೆಗೆ ಪ್ರವಾಸಿಗರು ಭೇಟಿ ನೀಡುವಂತೆ ಜಾಹಿರಾತು ನೀಡಲಾಗುತ್ತಿದೆ.<br>8. ಜಿಲ್ಲಾಡಳಿತದ ಮೂಲಕ ಪ್ರವಾಸಿ ತಾಣಗಳಲ್ಲಿ ಪ್ಲಾಸ್ಟಿಕ್ ನಿಷೇಧಿಸಲಾಗಿದೆ.<br>9. ಜಿಲ್ಲಾಡಳಿತದ ಮೂಲಕ ಸ್ವಚ್ಛತಾ ಪಕ್ವಾಡ ಕಾರ್ಯಕ್ರಮದ ಅಡಿಯಲ್ಲಿ ಜಿಲ್ಲೆಯ ಪ್ರಮುಖ ಪ್ರವಾಸಿ ಸ್ಥಳಗಳಲ್ಲಿ ಸ್ಥಳೀಯ ಸಂಘ ಸಂಸ್ಥೆಗಳ ಜೊತೆಗೂಡಿ ಸ್ವಚ್ಛತಾ ಅಭಿಯಾನವನ್ನು ಕೈಗೊಳ್ಳಲಾಗಿದೆ.<br><br>ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಪೂರಕವಾದ ಮೂಲಭೂತ ಅಭಿವೃದ್ಧಿ ಸೌಕರ್ಯಗಳನ್ನು ಒದಗಿಸಲಾಗಿದ್ದು, ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.<br><br>ಜಿಲ್ಲೆಯಲ್ಲಿ ಪರಿಸರ ಸ್ನೇಹಿ ಹಾಗೂ ಪ್ರವಾಸಿ ಸ್ನೇಹಿ ಪ್ರವಾಸೋದ್ಯಮವನ್ನು ಉತ್ತೇಜಿಸುವ ಸಂಬಂಧ 3 ಮಿನಿ ಬಸ್ಸುಗಳನ್ನು ಚಾಲನೆಗೊಳಿಸಲಾಗಿದೆ. |

ಸಂಖ್ಯೆ:ಪ್ರಇ 93 ಪ್ರವಾವಿ 2018

(ಸಾ.ರಾ.ಮಹೇಶ್)

ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು